ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಮುಖ್ಯ ಅಭಿಯಂತರವರ ಕಛೇರಿ, ದಾಸರಹಳ್ಳಿ ವಲಯ,

ಎಂ.ಇ.ಐ.ಬಡಾವಣೆ, ಬಾಗಲಗುಂಟೆ, ಹೆಸರಘಟ್ಟ ಮುಖ್ಯರಸ್ತೆ, ಬೆಂಗಳೂರು -560073.

ನಂ:ಬಿಬಿಎಂಪಿ/ಮು.ಅ/ದಾವ/ತಾ.ಮ/38 /2017-18 ದಿನಾಂಕ: 28/04/2017

ತಾಂತ್ರಿಕ ಮಂಜೂರಾತಿ

ವಿಷಯ: "Construction of RCC drain in Right Side Shooting Building Road at Ravindra Nagar Ward No.13, Mallasandra Shettyhalli Sub Division" ಕಾಮಗಾರಿಯ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ.

ಉಲ್ಲೇಖ: ಜಂಟಿ ಆಯುಕ್ತರು (ದಾಸರಹಳ್ಳಿ ವಲಯ) ರವರ ಕಛೇರಿ ಅಡಳಿತಾತ್ಮಕ ಅನುಮೋದನೆ **ಸಂಖ್ಯೆ: ಜಂ.ಆ/ದಾ.ವ/ಪಿಆರ್/ಆ.ಮ/ 11/2017-18, ದಿನಾಂಕ:** 27/04/2017

****

ಪ್ರಸ್ತಾವನೆ:-

ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ) ವಿಭಾಗ ರವರು ಮೇಲ್ಕಂಡ ಕಾಮಗಾರಿಯ ಅಂದಾಜು ಪಟ್ಟಿಯನ್ನು ರೂ. 50.00 ಲಕ್ಷ ಗಳ (ರೂಪಾಯಿ ಐವತ್ತು ಲಕ್ಷಗಳು ಮಾತ್ರ) ಮೊತ್ತಕ್ಕೆ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಅನುಮೋದನೆಯೊಂದಿಗೆ ತಾಂತ್ರಿಕ ಮಂಜೂರಾತಿ ಕೋರಿದ್ದು, ಉಲ್ಲೇಖಿತ ಪತ್ರದಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಪರಿಗಣಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, "Construction of RCC drain in Right Side Shooting Building Road at Ravindra Nagar Ward No.13, Mallasandra Shettyhalli Sub Division" ಕಾಮಗಾರಿಯ ಅಂದಾಜು ಪಟ್ಟಿಯನ್ನು ರೂ. 50.00 ಲಕ್ಷಗಳ (ರೂಪಾಯಿ ಐವತ್ತು ಲಕ್ಷಗಳು ಮಾತ್ರ) ಮೊತ್ತಕ್ಕೆ ತಯಾರಿಸಿ ಸಲ್ಲಿಸಿದ್ದು, ಈ ಅಂದಾಜು ಪಟ್ಟಿಗೆ ಕೆಳಕಂಡ ತಾಂತ್ರಿಕ ನಿಬಂಧನೆಗಳಿಗೆ ಒಳಪಟ್ಟು ತಾಂತ್ರಿಕ ಮಂಜೂರಾತಿ ನೀಡಲಾಗಿದೆ. ಈ ತಾಂತ್ರಿಕ ಮಂಜೂರಾತಿಯನ್ನು ಮುಖ್ಯ ಅಭಿಯಂತರವರ ದಾಖಲುಪಟ್ಟಿ ಸಂಖ್ಯೆ:- BBMP/CE/DZ/TS/38/2017-18, ದಿನಾಂಕ:28/4/17ರಲ್ಲಿ ನೊಂದಾಯಿಸಲಾಗಿದೆ.

ತಾಂತ್ರಿಕ ನಿಬಂಧನೆಗಳು:

1. ಅಂದಾಜಿನಲ್ಲಿ ಅಳವಡಿಸಿರುವ ಇಡಿಗಂಟು (Lumpsum) ರೂಪದಲ್ಲಿ ಒದಗಿಸಲಾದ ಮೊತ್ತಗಳಿಗೆ ವಿವರವಾದ ಅಂದಾಜುಗಳನ್ನು ಸಿದ್ದಪಡಿಸಿ, ಕೆಲಸ ಆರಂಭಿಸುವ ಮುನ್ನ ಸಕ್ಷಮ ಅಧಿಕಾರಿಗಳಿಂದ ಅನುಮೋದನೆ ಪಡೆಯತಕ್ಕದ್ದು.
2. ಕೆಲಸ ಪ್ರಾರಂಭಿಸುವ ಮುನ್ನ ಕಾಮಗಾರಿ ನಡೆಯುವ ಸ್ಥಳವು ವಿವಾದಗಳಿಂದ ಮುಕ್ತವಾಗಿದೆಯೆಂದು ಪರಿಶೀಲಿಸತಕ್ಕದ್ದು.

ಪು.ತಿ.ನೋ

Scanned by CamScanner